ದಿನಾಂಕ 11.12.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ- ಪ್ರತಿವಾದಿಗಳ ಪರ ವಕೀಲರಿಂದಃ-**

ಅಸಲು ದಾವಾ ಸಂಖ್ಯೆ 29/2017 ರಲ್ಲಿ ನ್ಯಾಯಾಲಯವು ತಾತ್ಕಾಲಿಕ ನಿರ್ಭಂದಕಾಜ್ಞೆ ಆದೇಶವನ್ನು ನೀಡಿತ್ತು ಎಂದರೆ ಸರಿ. ಸದರಿ ಆದೇಶದ ವಿರುದ್ದ ನಾನು ಈ ನ್ಯಾಯಾಲಯದಲ್ಲಿ ಮೇಲ್ಮನವಿಯನ್ನು ಸಲ್ಲಿಸಿದ್ದೆನು ಎಂದರೆ ಸರಿ. ಸದರಿ ಮೇಲ್ಮನವಿ ವಜಾ ಆಗಿರುತ್ತದೆ. ಪ್ರತಿವಾದಿಗಳು ಸರ್ವೆ ನಂ. 72/1 ರಲ್ಲಿ 44 ಸೆಂಟ್ಸ್ ಜಾಗದ ಸ್ವಾಧೀನದಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ಒತ್ತುವರಿಗೆ ಸಂಬಂಧಿಸಿದಂತೆ ನಾನು ಪ್ರತಿವಾದಿಗಳ ವಿರುದ್ದ ಪೋಲೀಸರಿಗೆ ದೂರನ್ನು ನೀಡಿದ್ದು, ಸದರಿ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಪ್ರತಿವಾದಿಗಳು ನೋಂದಾಯಿತ ಕ್ರಯಪತ್ರದ ಮೂಲಕ ಖರೀದಿಸಿದ ಸ್ವತ್ತಿನಲ್ಲಿ ಸ್ವಾಧೀನದಲ್ಲಿ ಇದ್ದು, ಸದರಿ ಸ್ವತ್ತನ್ನು ಕಬಳಿಸುವ ಉದ್ದೇಶದಿಂದ ನಾನು ಸುಳ್ಳು ದಾವೆಯನ್ನು ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾಸ್ವತ್ತಿಗೆ ಸಂಬಂಧಿಸಿದಂತೆ ನಾನು ಪಹಣಿ ಪತ್ರಿಕೆಯನ್ನು ಮಾತ್ರ ಹಾಜರುಪಡಿಸಿರುತ್ತೇನೆ.

**ಮರು ವಿಚಾರಣೆಃ- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ
(ಸಾಕ್ಷಿದಾರರ ಸಹಿ) ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.